ಜೆಎಸ್‌ಎಸ್ ಮಹಾವಿದ್ಯಾಪೀಠ

**ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು**

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)

'ಉತ್ಕೃಷ್ಟತಾ ಅಂತಃಸಾಮರ್ಥ್ಯ ಉಳ್ಳ' ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ

ಊಟಿರಸ್ತೆ, ಮೈಸೂರು-570 025, ಕರ್ನಾಟಕ

☎ 0821-2548236 & 2548380 Fax: 0821-2548238 E-mail: jssautonomous@gmail.com

ದಿನಾಂಕ: 20.07.2016

## ಪ್ರಕಟಣೆ ಕೃಪೆಗಾಗಿ

## ವಿದ್ಯಾರ್ಥಿಜೀವನ ಒಂದು ಕಠಿಣ ತಪಸ್ಸು

–ಡಾ ಆರ್ ರಾಜಣ್ಣ

ದಿನಾಂಕ:20.07.2016 ರಂದು ಮೈಸೂರು ನಗರದ ಬಿ ಎನ್ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ ಪ್ರಥಮ ಪದವಿ ವಿದ್ಯಾರ್ಥಿಗಳಿಗೆ ಸ್ವಾಗತ ಮತ್ತು ಅರಿವು ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮೈಸೂರು ವಿಶ್ವವಿದ್ಯಾನಿಲಯದ ಪರೀಕ್ಷಾಂಗ ಕುಲಸಚಿವರಾದ ಪ್ರೊ ಆರ್ ರಾಜಣ್ಣನವರು ವಿದ್ಯಾರ್ಥಿಗಳನ್ನು ಕುರಿತು ಮಾತನಾಡುತ್ತಾ, ವಿದ್ಯಾರ್ಥಿ ಜೀವನ ಒಂದು ಕಠಿಣ ತಪಸ್ಸು. ಇದರಲ್ಲಿ ಯಶಸ್ವಿಯಾದರೆ ನಿಮ್ಮ ಜೀವನ ಸಾರ್ಥಕವಾಗುತ್ತದೆ. ನಾನು ಓದಿದ ಈ ಕಾಲೇಜಿನಲ್ಲಿ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಬೇಕಾದ ಎಲ್ಲಾ ಸೌಲಭ್ಯಗಳಿವೆ. ಇವುಗಳನ್ನು ತಾವು ಸದುಪಯೋಗಪಡಿಸಿಕೊಂಡು ತಮ್ಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕೆಂದು ಕರೆ ನೀಡಿದರು. ಆಧುನಿಕ ಸೌಲಭ್ಯಗಳಿಗೆ ದಾಸರಾಗದೆ, ಪರಂಪರೆಯ ಮಹತ್ವವನ್ನು ಅರಿತು, ನಿರ್ದಿಷ್ಟವಾದ ಗುರಿ ಇಟ್ಟುಕೊಂಡು ಮುಂದೆ ಸಾಗಿದರೆ ನಿಮ್ಮ ಹಿಂದೆ ಗುರುಗಳ ಆಶೀರ್ವಾದ ಇದ್ದೇಇರುತ್ತದೆ. ಪೋಷಕರ ಒತ್ತಾಯಕ್ಕೆ ಮಣಿದು ಒಲ್ಲದ ಪದವಿಯನ್ನು ಆಯ್ಕೆಮಾಡಿಕೊಳ್ಳದೆ, ನೀವು ಇಷ್ಟಪಡುವ ಪದವಿಯನ್ನು ಆಯ್ಕೆಮಾಡಿಕೊಂಡು ವಿದ್ಯಾಭ್ಯಾಸ ಮಾಡುವುದು ಸೂಕ್ತ. ಎಲ್ಲರೂ ವೈದ್ಯರು ಅಥವಾ ಇಂಜಿನಿಯರ್‌ಗಳಾಗದೆ, ವಿಜ್ಞಾನಿಗಳು, ಅಧ್ಯಾಪಕರು, ಕಲಾವಿದರು, ಸೈನಿಕರು, ಆಡಳಿತಗಾರರು ಆಗಲು ಪ್ರಯತ್ನಿಸಬೇಕು ಎಂದು ತಿಳಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕಾಲೇಜು ಸಮುಚ್ಚಯದ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ ಬಿ ವಿ ಸಾಂಬಶಿವಯ್ಯನವರು ಮಾತನಾಡಿ ಕಾಲೇಜಿನ ಅಭಿವೃದ್ಧಿ ಮತ್ತು ಕಾಲೇಜಿನಲ್ಲಿ ಲಭ್ಯವಿರುವ ಹೊಸ ಕೋರ್ಸುಗಳ ಅನುಕೂಲತೆಗಳ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಸಿದರು. ಇದೇ ಸಂದರ್ಭದಲ್ಲಿ ಕಾಲೇಜಿನ ಸುವರ್ಣಮಹೋತ್ಸವದ ಚಟುವಟಿಕೆಗಳ ಬಗ್ಗೆ ಕಾರ್ಯದರ್ಶಿಗಳಾದ ಪ್ರೊ ಡಿ ಎಸ್ ಸದಾಶಿವಮೂರ್ತಿ ಯವರು ಮಾತನಾಡಿದರು.

ಕಾಲೇಜಿನಲ್ಲಿ ಲಭ್ಯವಿರುವ ಎನ್‌ಎಸ್‌ಎಸ್, ಎನ್‌ಸಿಸಿ, ರೆಡ್‌ಕ್ರಾಸ್, ನೇಮಕಾತಿ ಘಟಕ, ಸಾಂಸ್ಕೃತಿಕ ವೇದಿಕೆ, ಕ್ರೀಡಾ ವೇದಿಕೆ, ಪರೀಕ್ಷಾ ವಿಭಾಗ, ಗ್ರಂಥಾಲಯ ಸೌಲಭ್ಯ ಮೊದಲಾದವುಗಳ ಬಗ್ಗೆ ಸಂಬಂದ್ದ ಪಟ್ಟ ಸಂಚಾಲಕರು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ಶ್ರೀ ವೃಷಬೇಂದ್ರ ಸಿ ಯವರು ಪ್ರಾರ್ಥಿಸಿದರು. ಪ್ರಾಂಶುಪಾಲರಾದ ಪ್ರೊ ಎಂ ಮಹದೇವಪ್ಪನವರು ಸ್ವಾಗತಿಸಿದರು. ಪ್ರೊ ಎಸ್ ಬಿ ನಾಗರಾಜಮೂರ್ತಿ ಯವರು ವಂದಿಸಿದರು. ಡಾ ಎಂ ಸಿ ಸರೋಜಮ್ಮಣ್ಣಿ ಯವರು ಕಾರ್ಯಕ್ರಮ ನಿರೂಪಿಸಿದರು.

ಪ್ರಾಂಶುಪಾಲರು

(ಪ್ರೊ ಎಂ ಮಹದೇವಪ್ಪ)

ಪ್ರಾಂಶುಪಾಲರು
ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
(ಸ್ವಾಯತ್ತ)
ಊಟಿ ರಸ್ತೆ, ಮೈಸೂರು-570 025.

ಗೆ

ಸಂಪಾದಕರು

---------------

---------------

ಮೈಸೂರು